# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಕೇಂದ್ರ ಪುರಸ್ಕೃತ “ಸಮುದ್ರದಲ್ಲಿ ಮೀನುಗಾರರ ಸುರಕ್ಷತೆ” ಯೋಜನೆಯಡಿ ಅನುದಾನ ಬಿಡುಗಡೆ.

ಓದಲಾಗಿದೆ:- (1) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ:12014/2/09-FY(T-1) ದಿನಾಂಕ:23-11-2009.

(2) ಜಮಾ ದೃಢೀಕರಣ ಪತ್ರ ಸಂಖ್ಯೆ:ಆಇ/13/ಬಿಜಿಎಲ್/2009 ದಿನಾಂಕ:19-03-2010.

(3) ಪತ್ರ ಸಂಖ್ಯೆ:ಪಂವಾಂಯೋ/78/2009-10 ದಿನಾಂಕ:07-12-2009 04-02-2010, 22-02-2010 ಮತ್ತು ದಿನಾಂಕ:30-03-2010.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಪತ್ರದಲ್ಲಿ, ಕೇಂದ್ರ ಸರ್ಕಾರವು 2009-10ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ “ಸಮುದ್ರ ಮೀನುಗಾರಿಕೆ, ಮೂಲಭೂತ ಸೌಕರ್ಯ ಹಾಗೂ ಹಿಡುವಳಿ ನಂತರದ ಚಟುವಟಿಕೆಗಳ ಅಭಿವೃದ್ಧಿ ಯೋಜನೆ” ಅಡಿ “ಸಮುದ್ರದಲ್ಲಿ ಮೀನುಗಾರರ ಸುರಕ್ಷತೆ” ಎಂಬ ನೂತನ ಯೋಜನೆಯನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ (ನಿ), ಮಂಗಳೂರು ಇವರ ಮೂಲಕ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿಯೊಂದಿಗೆ ರೂ.200.00ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಜಮಾ ದೃಢೀಕರಣ ಪತ್ರದಲ್ಲಿ ಆರ್ಥಿಕ ಇಲಾಖೆ ರೂ.200.00 ಲಕ್ಷಗಳನ್ನು ರಾಜ್ಯ ಸರ್ಕಾರದ ಖಾತೆಗೆ ದಿನಾಂಕ:17-03-2010ರಂದು ಜಮೆ ಆಗಿರುವ ಬಗ್ಗೆ ದೃಢೀಕರಿಸಿದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ಪತ್ರಗಳಲ್ಲಿ ಮೀನುಗಾರಿಕೆ ನಿರ್ದೇಶಕರು, ಕರಾವಳಿ ಮೀನುಗಾರಿಕೆ ಅನೇಕ ಕುಟುಂಬಗಳಿಗೆ ಜೀವನಾಧಾರವಾಗಿದ್ದು ಅದು ಅತ್ಯಂತ ಅಪಾಯಕಾರಿ ವೃತ್ತಿಯಾಗಿರುವುದರಿಂದ ಕೇಂದ್ರ ಸರ್ಕಾರವು ಮೀನುಗಾರರ ಸುರಕ್ಷತೆಯನ್ನು ಮನಗೊಂಡು ಕೇಂದ್ರ ಪುರಸ್ಕೃತ ಯೋಜನೆಯಡಿ “ಸಮುದ್ರದಲ್ಲಿ ಮೀನುಗಾರರ ಸುರಕ್ಷತೆ” ಎಂಬ ನೂತನ ಯೋಜನೆ ಒಂದನ್ನು ಅಳವಡಿಸಿರುತ್ತದೆ ಎಂದು ತಿಳಿಸಿರುತ್ತಾರೆ. ಸದರಿ ಯೋಜನೆಯಡಿ ಮೀನುಗಾರರ ಉಪಯೋಗಕ್ಕಾಗಿ ಜಿ.ಪಿ.ಎಸ್. ಸಂವಹನ ಉಪಕರಣ, ಎಕೋ ಸೌಂಡರ್, ಸರ್ಚ್ ಅಂಡ್ ರೆಸ್ಕ್ಯೂ ಬೀಕಾನ್ ಉಪಕರಣ ಹಾಗೂ ಜೀವರಕ್ಷಕ ಕವಚಗಳನ್ನೊಳಗೊಂಡ ಒಂದು ಕಿಟ್ ಖರೀದಿಸಲು ಉದ್ದೇಶಿಸಿದ್ದು, ಅದರಲ್ಲಿ ಕೇಂದ್ರ ಸರ್ಕಾರ ಘಟಕ ವೆಚ್ಚದ ಶೇ.75ರಷ್ಟು ಮೊತ್ತವನ್ನು ಹಾಗೂ ಬಾಕಿ ಶೇ.25ರಷ್ಟನ್ನು ಫಲಾನುಭವಿಗಳೇ ಭರಿಸಬೇಕಾಗಿರುತ್ತದೆ ಎಂದು ತಿಳಿಸಿರುತ್ತಾರೆ. ಕರ್ನಾಟಕ ಕರಾವಳಿಯಲ್ಲಿ 1,68,830 ಮೀನುಗಾರರು 300 ಕಿ.ಮೀ. ತೀರ ಪ್ರದೇಶದಲ್ಲಿ ಮೀನುಗಾರಿಕೆ ನಡೆಸುತ್ತಿದ್ದು, ಅವರ ಸುರಕ್ಷತೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ರಾಜ್ಯದಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು 3 ವರ್ಷಗಳಿಗಾಗಿ ರೂ.90.96 ಕೋಟಿಗಳ ಅನುದಾನಕ್ಕಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿ, 2009-10ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ರೂ.200.00 ಲಕ್ಷಗಳನ್ನು ಬಿಡುಗಡೆಗೊಳಿಸಬೇಕಾಗಿದ್ದು, ಸದರಿ ಹಣವನ್ನು ಈ ಯೋಜನೆಯ ಅನುಷ್ಠಾನಕ್ಕಾಗಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳಿ (ನಿ), ಮಂಗಳೂರು ಇವರಿಗೆ ಬಿಡುಗಡೆಗೊಳಿಸಲು ಹಾಗೂ ಈ [illegible] “ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು

ಬಳಸುವ ಹೆಚ್.ಎಸ್.ಡಿ. ಮೇಲಿನ ಕೇಂದ್ರ ಅಬಕಾರಿ ಮರುಪಾವತಿ" ಯೋಜನೆಗೆ ಲೆಕ್ಕ ಶೀ. 2405-00-103-0-06 (ಯೋಜನೆ)ಅಡಿ ಒದಗಿಸಿರುವ ರೂ.500.00ಲಕ್ಷಗಳ ಅನುದಾನದಲ್ಲಿ ಉ. ಯಾಗುವ ರೂ.200.00 ಲಕ್ಷಗಳನ್ನು ಅದೇ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಒದಗಿಸಬೇಕೆಂದು ಕೋರಿರುತ್ತಾರ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ:ಪಸಂಮೀ 194 ಮೀಇಅಂಯೋ 2009, ಬೆಂಗಳೂರು ದಿನಾಂಕ:31-03-2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2009-10ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ - "ಸಮುದ್ರ ಮೀನುಗಾರಿಕೆ, ಮೂಲಭೂತ ಸೌಕರ್ಯ ಹಾಗೂ ಹಿಡುವಳಿ ನಂತರದ ಚಟುವಟಿಕೆಗಳ ಅಭಿವೃದ್ಧಿ ಯೋಜನೆ" ಅಡಿ "ಸಮುದ್ರದಲ್ಲಿ ಮೀನುಗಾರರ ಸುರಕ್ಷತೆ" ಎಂಬ ನೂತನ ಯೋಜನೆಯನ್ನು, ಕೇಂದ್ರ ಸರ್ಕಾರ ಪತ್ರ ಸಂಖ್ಯೆ:12014/2/2009-FY(T-1) ದಿನಾಂಕ:23-11-2009ರಲ್ಲಿ ವಿಧಿಸಿರುವ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳಿ (ನಿ), ಮಂಗಳೂರು ಮೂಲಕ ಅನುಷ್ಠಾನಗೊಳಿಸಲು ರೂ.200.00 (ಇನ್ನೂರು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ಬಿಡುಗಡೆಗೊಳಿಸಿ ಆದೇಶಿಸಿದೆ.

ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ "2405-00-103-0-18-059 (ಯೋಜನೆ)" ಅಡಿ ಪೂರಕ ಅಂದಾಜು-IIರಲ್ಲಿ 2009-10ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಸದರಿ ಮೊತ್ತವನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳಿ (ನಿ), ಮಂಗಳೂರುರವರು ಸಲ್ಲಿಸುವ ಪೇಯೀಸ್ ರಸೀದಿಗೆ ಮೀನುಗಾರಿಕೆ ನಿರ್ದೇಶಕರು ಮೇಲು ರುಜು ಮಾಡಿ ರಾಜ್ಯ ಹುಜೂರ್ ಖಜಾನೆಯಿಂದ ಸೆಳೆದು ಪಾವತಿಸಲು ಅನುಮತಿ ನೀಡಿದೆ.

ಸದರಿ ಯೋಜನೆಯಡಿಯಲ್ಲಿ ಜಿ.ಪಿ.ಎಸ್. ಸಂವಹನ ಉಪಕರಣ, ಎಕೋ ಸೌಂಡರ್, ಸರ್ಚ್ ಅಂಡ್ ರೆಸ್ಕ್ಯೂ ಹಾಗೂ ಬೀಕಾನ್ ಉಪಕರಣಗಳನ್ನೊಳಗೊಂಡ ಒಂದು ಕಿಟ್ ಖರೀದಿಸಲು ಕೇಂದ್ರ ಸರ್ಕಾರವು ಘಟಕ ವೆಚ್ಚದ ಶೇ.75ರಷ್ಟನ್ನು ಭರಿಸಿದ್ದು, ಉಳಿದ ಶೇ.25ರಷ್ಟನ್ನು ಫಲಾನುಭವಿಗಳಿಂದಲೇ ಭರಿಸತಕ್ಕದ್ದು.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಹಾಗೂ ನಿಯಮಗಳು 2000 ದಲ್ಲಿನ ಸೂಚನೆಗಳನ್ನು ತಪ್ಪದೇ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/658/ವೆಚ್ಚ-4/2009 ದಿನಾಂಕ:27-03-2010ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಿ.ಎಂ.ರಾಜಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ(ಮೀ)

ಇವರಿಗೆ:

2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3) ಆಡಳಿತ ನಿರ್ದೇಶಕರು, ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾ ಸಹಕಾರಿ ಮೀನು ಮಾರಾಟ ಮಹಾಮಂಡಳಿ (ನಿ), ಮಂಗಳೂರು.
4) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4&5)
7) ಶಾಖಾ ರಕ್ಷಾ ಕಡತ:ಹೆಚ್ಚಿನ ಪ್ರತಿಗಳು.